## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016-17ನೇ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸುಗಳನ್ನೊಳಗೊಂಡಂತೆ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗಧಿಗೊಳಿಸುವ/ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂ. ಕಾಶಿಇ/ಶೈವಿ/ 215/ ಸ್ನಾ.ಪ್ರ. ಶುಲ್ಕ/2015-16, ದಿನಾಂಕ 11-04-2016

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇವರು 2016-17ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪದವಿ ಕಾಲೇಜುಗಳಲ್ಲಿ ನಡೆಯುತ್ತಿರುವ ಸ್ನಾತಕೋತ್ತರ ಪದವಿ ಕೋರ್ಸುಗಳ ಶುಲ್ಕವನ್ನು ಪರಿಷ್ಕರಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಇಡಿ 240 ಯುಎನ್ಇ 2016, ಬೆಂಗಳೂರು, ದಿನಾಂಕ: 20-08-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸುಗಳನ್ನೊಳಗೊಂಡಂತೆ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಈ ಕೆಳಕಂಡಂತೆ ಶುಲ್ಕ ನಿಗಧಿಗೊಳಿಸುವ/ ಪರಿಷ್ಕರಿಸಿ ಆದೇಶಿಸಲಾಗಿದೆ.

1. **ಸ್ನಾತಕೋತ್ತರ ಕೋರ್ಸುಗಳ ಶುಲ್ಕದ ವಿವರ:- (ಎಂ.ಬಿ.ಎ., ಮತ್ತು ಎಂ.ಸಿ.ಎ., ಹೊರತುಪಡಿಸಿ)**

| ಕ್ರ.ಸಂ. | ವಿವರ | 2016-17ನೇ ಸಾಲಿಗೆ ನಿಗಧಿಪಡಿಸಬೇಕಾಗಿರುವ ಶುಲ್ಕ |
|---|---|---|
| 1 | ಅರ್ಜಿ ಶುಲ್ಕ | 50-00 |
| 2 | ಪ್ರವೇಶ ಶುಲ್ಕ | 100-00 |
| 3 | ಪಾಠ ಶುಲ್ಕ | 1000-00 |
| 4 | ಪ್ರಯೋಗಾಲಯ ಶುಲ್ಕ | 300-00 |
| 5 | ವೈದ್ಯಕೀಯ ತಪಾಸಣಾ ಶುಲ್ಕ | 30-00 |
| 6 | ವರ್ಗಾವಣೆ ಶುಲ್ಕ | 50-00 |
| 7 | ವಿದ್ಯಾಭ್ಯಾಸ ಪ್ರಮಾಣ ಪತ್ರ | 20-00 |
| 8 | ವಾಚನಾಲಯ ಶುಲ್ಕ | 100-00 |
| 9 | ಕ್ರೀಡಾ ಶುಲ್ಕ | 100-00 |
| 10 | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100-00 |
| 11 | ಸ್ನಾತಕೋತ್ತರ ವಿಭಾಗ ಅಭಿವೃದ್ಧಿ ಶುಲ್ಕ | 1000-00 |
| 12 | ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ | (ಸಾರ್ವಜನಿಕ ಶಿಕ್ಷಣ ಇಲಾಖೆಯು ಶುಲ್ಕ ನಿಗಧಿಪಡಿಸಿದಂತೆ) |
| 13 | ಅಧ್ಯಾಪಕರ ಸಹಾಯ ನಿಧಿ | |
| 14 | ಪ್ರವೇಶ ಶುಲ್ಕ | ಆಯಾ ವಿಶ್ವವಿದ್ಯಾಲಯಗಳು ಶುಲ್ಕ ನಿಗಧಿಪಡಿಸಿದಂತೆ |
| 15 | ನೋಂದಣಿ ಶುಲ್ಕ | |
| 16 | ಪರೀಕ್ಷಾ ಶುಲ್ಕ | |
| 17 | ಇನ್ನಿತರೆ ವಿಶ್ವವಿದ್ಯಾಲಯ ಶುಲ್ಕ | |

....2

2. ಎಂ.ಬಿ.ಎ., ಮತ್ತು ಎಂ.ಸಿ.ಎ., ಕೋರ್ಸುಗಳಲ್ಲಿ ವ್ಯಾಸಂಗ ನಡೆಸುತ್ತಿರುವ ಸಾಮಾನ್ಯ ವಿದ್ಯಾರ್ಥಿಗಳಿಗೆ ಸರ್ಕಾರವು ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ನಿಗದಿಪಡಿಸಲಾಗಿದ್ದ ವಾರ್ಷಿಕ ರೂ. 20,000/-ಗಳ ಶುಲ್ಕವನ್ನೇ 2016-17ನೇ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/215/ಸ್ನಾ.ಪ.ಶುಲ್ಕ/2015-16

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:20/08/2016

2016-17ನೇ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳನ್ನೊಳಗೊಂಡಂತೆ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗಧಿಗೊಳಸುವ /ಪರಿಷ್ಕರಿಸುವ ಬಗ್ಗೆ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಇಡಿ/240/ಯುಎನ್ಇ/ 2016 ಬೆಂಗಳೂರು, ದಿನಾಂಕ:20.08.2016 ನ್ನು ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

A.L. Muralidhara

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ- ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – (ಜಂಟಿ ನಿರ್ದೇಶಕರ ಮುಖಾಂತರ).
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಲಾಗಿದೆ.

ಪ್ರತಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ